# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1087 |
| ಸದಸ್ಯರ ಹೆಸರು | : | ಶ್ರೀ ಸಲೀಂ ಅಹಮದ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 28-12-2022 |
| ಉತ್ತರಿಸುವ ಸಚಿವರು | : | ಲೋಕೋಪಯೋಗಿ ಸಚಿವರು |

| ಕ್ರಮ ಸಂಖ್ಯೆ | ಪ್ರಶ್ನೆಗಳು | ಉತ್ತರ |
|---|---|---|
| ಅ) | ಹುಬ್ಬಳ್ಳಿ-ಧಾರವಾಡ ನಗರದ ಮಧ್ಯಭಾಗದಲ್ಲಿ ಬೈಪಾಸ್ ರಸ್ತೆ ನಿರ್ಮಿಸುವ ಪ್ರಸ್ತಾವನೆಯು ಯಾವ ಹಂತದಲ್ಲಿದೆ; | ರಾಷ್ಟ್ರೀಯ ಹೆದ್ದಾರಿ-48 (ಹಳೆ-4) ಕಿ.ಮೀ.403.00 ರಿಂದ 433.00 ರ ಹುಬ್ಬಳ್ಳಿ-ಧಾರವಾಡ ಬೈಪಾಸ್ 6 ಪಥದ ರಸ್ತೆ ನಿರ್ಮಾಣ ಕಾಮಗಾರಿಯನ್ನು ಭಾರತಮಾಲಾ ಪರಿಯೋಜನಾ (ಹಂತ-1) ರಡಿ ಭಾರತ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ, ಬೆಂಗಳೂರು ರವರು ಕೈಗೊಳ್ಳುತ್ತಿದ್ದು, M/s. APS Hydro – M/s. RSC Infra Engineers (JV) ರವರಿಗೆ EPC ಆಧಾರದ ಟೆಂಡರ್ ಮೇಲೆ ದಿನಾಂಕ:06-03-2022ರಲ್ಲಿ ನೀಡಲಾಗಿದ್ದು, ಶೀಘ್ರದಲ್ಲಿ ಕಾಮಗಾರಿಯನ್ನು ಪ್ರಾರಂಭಿಸಲಾಗುವುದು ಎಂದು ಭಾರತ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದವರು ವರದಿಸಿರುತ್ತಾರೆ. |
| ಆ) | ಈ ನಗರಗಳ ಮಧ್ಯದಲ್ಲಿ ಬೈಪಾಸ್ ನಿರ್ಮಾಣಕ್ಕೆ ಕೇಂದ್ರ ಸರ್ಕಾರವು ಅನುಮೋದನೆಯನ್ನು ನೀಡಿದ್ದು, ಟೆಂಡರನ್ನು ಕರೆದು ಭೂಮಿ ಪೂಜೆ ಆಗಿ ಎರಡು ವರ್ಷಗಳು ಗತಿಸಿದ್ದರೂ ಯಾವ ಪ್ರಗತಿಯು ಕಾಣದಿರುವುದು ಸರ್ಕಾರದ ಗಮನದಲ್ಲಿದೆಯೇ; | |
| ಇ) | ಪ್ರಸ್ತುತ ದುಸ್ಥಿತಿಯಲ್ಲಿರುವ ರಸ್ತೆಗಳಿಂದ ಆಗಾಗ್ಗೆ ಅಪಘಾತಗಳು ಸಂಭವಿಸುತ್ತಿದ್ದು, ಇಲ್ಲಿಯವರೆವಿಗೂ ಸಾವಿರಕ್ಕೂ ಹೆಚ್ಚಿನ ಜನರು ತಮ್ಮ ಪ್ರಾಣಗಳನ್ನು ತೆತ್ತಿದ್ದು, ಇದರ ಜೊತೆ ಜಾನುವಾರುಗಳು, ಅಪಘಾತದಿಂದಾಗಿ ದಿನನಿತ್ಯ ಮರಣಕ್ಕೀಡಾಗುತ್ತಿರುವುದು ಸರ್ವೆ ಸಾಮಾನ್ಯವಾಗಿದ್ದು; ಸರ್ಕಾರಕ್ಕೆ ತಿಳಿದಿದೆಯೇ; | ಹುಬ್ಬಳ್ಳಿ-ಧಾರವಾಡ ಬೈಪಾಸ್ ರಸ್ತೆಯಲ್ಲಿ ಹಲವಾರು ಅಪಘಾತಗಳು ಸಂಭವಿಸಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಆದ್ದರಿಂದ ಹಾಲಿ ಇರುವ ಬೈಪಾಸ್ ರಸ್ತೆಯನ್ನು 6 ಪಥಗಳನ್ನಾಗಿ ನಿರ್ಮಿಸುವ ಸಲುವಾಗಿ ಮಾನ್ಯ ಸಚಿವರು, ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ, ನವದೆಹಲಿ ರವರು ದಿನಾಂಕ: 11.02.2021 ರಲ್ಲಿ ತುರ್ತು ಸಭೆ ಕರೆದು ಈ ಭಾಗದ ರಸ್ತೆಯನ್ನು 6 ಪಥದ ರಸ್ತೆಯನ್ನಾಗಿ ಅಗಲೀಕರಣ ಗೊಳಿಸಲು ಶೀಘ್ರ ಕಾಮಗಾರಿಯನ್ನು ಕೈಗೊಳ್ಳಲು ಭಾರತ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ, ಬೆಂಗಳೂರುರವರಿಗೆ ಸೂಚಿಸಿದ್ದು, ಅದರಂತೆ ಕ್ರಮ ವಹಿಸಲಾಗುತ್ತಿದೆ. |
| ಈ) | ಈ ಬೈಪಾಸ್ ನಿರ್ಮಾಣ ಕಾಮಗಾರಿಯನ್ನು ಶೀಘ್ರಗತಿಯಲ್ಲಿ ಪ್ರಾರಂಭಿಸಿ, ಮುಕ್ತ ಸಂಚಾರಕ್ಕೆ ಅನುವು ಮಾಡಿಕೊಡುವ ಸಲುವಾಗಿ ಸರ್ಕಾರದ ಕ್ರಮವೇನು? | ಈ ಬೈಪಾಸ್ ನಿರ್ಮಾಣಕ್ಕೆ ಈಗಾಗಲೇ ಗುತ್ತಿಗೆದಾರರನ್ನು ನೇಮಿಸಲಾಗಿದ್ದು, ಶೀಘ್ರದಲ್ಲಿ ಕಾಮಗಾರಿಯನ್ನು ಪ್ರಾರಂಭಿಸಲು ಕ್ರಮವಹಿಸಲಾಗಿದೆ ಎಂದು ಭಾರತ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದವರು ವರದಿ ಮಾಡಿರುತ್ತಾರೆ. |

ಕಡತ ಸಂಖ್ಯೆ: ಲೋಇ 444 ಸಿಐಹೆಚ್ 2022 (ಇ)

(ಸಿ.ಸಿ. ಪಾಟೀಲ)
ಲೋಕೋಪಯೋಗಿ ಸಚಿವರು